ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03

**E-mail Id: adpimusicsection@gmail.com** ದೂರವಾಣಿ ಸಂಖ್ಯೆ: 080-23360109

ಸಂಖ್ಯೆ:ವಿ1/ವಿ.ಸ.ಪ/ಅ.ಸೂ32/2022-23 ದಿನಾಂಕ:15/03/2023

## ಸುತ್ತೋಲೆ

**ವಿಷಯ:-** ಡಿಸೆಂಬರ್ 2022 ರ ಮಾಹೆಯಿಂದ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶ ಪ್ರಕಟಣೆ ಕುರಿತು.

***************

ಡಿಸೆಂಬರ್ 2022 ರ ಮಾಹೆಯಿಂದ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶವನ್ನು ಮಂಡಳಿಯ ವೆಬ್‌ಸೈಟ್ **https://kseab.karnataka.gov.in** ನಲ್ಲಿ **ದಿನಾಂಕ: 16.03.2023 ರಂದು** ಪ್ರಕಟಿಸಲಾಗುವುದು. ಹಾಗೂ ಉತ್ತೀರ್ಣರಾದ ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ಫಲಿತಾಂಶ ರವಾನಿಸಲಾಗುವುದು. ಸದರಿ ಫಲಿತಾಂಶವನ್ನು ಪರೀಕ್ಷಾ ಕೇಂದ್ರದ ಲಾಗಿನ್‌ನಲ್ಲಿ **ದಿನಾಂಕ:17.03.2023 ರಂದು** ಲಭ್ಯಮಾಡಲಾಗುವುದು ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಫಲಿತಾಂಶ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷಾ ಕೇಂದ್ರದ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗದಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ/ಮರುಮೌಲ್ಯಮಾಪನ/ಮರುಎಣಿಕೆಗಾಗಿ ಅರ್ಜಿ ಸಲ್ಲಿಸಲು ಈ ಕೆಳಗಿನಂತೆ ದಿನಾಂಕ ನಿಗದಿಪಡಿಸಿದೆ.

| ಕ್ರ.ಸಂ. | ವಿವರ | ದಿನಾಂಕ |
|---|---|---|
| **01** | **ಡಿಸೆಂಬರ್ 2022ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ.** | **17.03.2023** |
| **02** | **ಡಿಸೆಂಬರ್ 2022ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ** | **27.03.2023** |
| **03** | **ಡಿಸೆಂಬರ್ 2022ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಯಾಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ** | **31.03.2023** |
| **03** | **ಡಿಸೆಂಬರ್ 2022ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ** | **01.04.2023** |

| 04 | ಡಿಸೆಂಬರ್ 2022ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 06.04.2023 |
|---|---|---|

ಲಿಖಿತ ಪರೀಕ್ಷೆಯ ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್ ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆ ಅಥವಾ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್ ಪ್ರತಿಯನ್ನು ಪಡೆದ ನಂತರ, ಅಂಕಗಳ ನೀಡಿಕೆ/ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ, ಖಚಿತಪಡಿಸಿಕೊಂಡ ನಂತರವೇ ಅಪೇಕ್ಷಿಸಿದಲ್ಲಿ ಮರುಮೌಲ್ಯಮಾಪನ/ ಮರುಎಣಿಕೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. **ಪ್ರಾಯೋಗಿಕ ಪರೀಕ್ಷೆಗೆ ಸಂಬಂಧಿಸಿದಂತೆ ಅಂಕಗಳ ಮರುಎಣಿಕೆಗೆ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದೆ.**

**ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಮಂಡಲಿಯ ಜಾಲತಾಣ ವಿಳಾಸ **https://kseab.karnataka.gov.in** ರಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆಯಲು, ಆನ್‌ಲೈನ್ ಅರ್ಜಿ ಸಲ್ಲಿಸುವ ಅವಕಾಶ ಕಲ್ಪಿಸಲಾಗಿದ್ದು, ಅರ್ಜಿ ಸಲ್ಲಿಸಬಹುದಾಗಿದೆ. ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಪಡೆಯಲು ಅಭ್ಯರ್ಥಿಗಳು ತಮ್ಮ ನೋಂದಣಿ ವಿವರಗಳನ್ನು ಹಾಗೂ ಸ್ಕ್ಯಾನ್‌ಪ್ರತಿ ಪಡೆಯುವ ವಿಷಯಗಳ ಮಾಹಿತಿಯನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಪಡೆಯಲು ಬಯಸುವ ಅಭ್ಯರ್ಥಿಗಳು ಒಂದು ಉತ್ತರ ಪತ್ರಿಕೆಗೆ ಶುಲ್ಕ ರೂ.500/- ಗಳನ್ನು ಆನ್‌ಲೈನ್ ಪೇಮೆಂಟ್ ಮೂಲಕ ಪಾವತಿಸಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಅಪ್‌ಲೋಡ್ ಆಗಿರುವ ಬಗ್ಗೆ ಅಭ್ಯರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಮಾಹಿತಿಯನ್ನು ರವಾನಿಸಲಾಗುವುದು. ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಮೇಲ್ಕಾಣಿಸಿರುವ ಜಾಲತಾಣದಿಂದಲೇ ನೋಂದಾಯಿತ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವ **OTP** ಯನ್ನು ಬಳಸಿ ಡೌನ್‌ಲೋಡ್ ಮಾಡಿಕೊಳ್ಳಬಹುದು.

**ಮರುಎಣಿಕೆಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡು ಮರುಎಣಿಕೆಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಒಂದು ವಿಷಯದ ಒಂದು ಪತ್ರಿಕೆಗೆ ಶುಲ್ಕ ರೂ.150/- ರಂತೆ ಆನ್‌ಲೈನ್ ಮೂಲಕ ಪಾವತಿಸಬೇಕಾಗುತ್ತದೆ. ಒಂದುವೇಳೆ ಅಂಕಗಳಲ್ಲಿ ವ್ಯತ್ಯಾಸವಿದ್ದಲ್ಲಿ, ಪರಿಷ್ಕೃತ ಅಂಕದ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಭ್ಯರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅಪೇಕ್ಷಿಸಿದಲ್ಲಿ, ಆನ್‌ಲೈನ್ ಮೂಲಕ ಒಂದು ವಿಷಯಕ್ಕೆ ರೂ.800/- ಗಳಂತೆ ಶುಲ್ಕ ಪಾವತಿಸಬೇಕಿರುತ್ತದೆ.

ಮರುಮೌಲ್ಯಮಾಪನದ ನಂತರದ ಅಂಕದ ವಿವರಗಳನ್ನು ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ ರವಾನಿಸಲಾಗುವುದು. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

ಮರುಎಣಿಕೆ ಅಥವಾ ಮರುಮೌಲ್ಯಮಾಪನದ ಫಲಿತಾಂಶವನ್ನು ಪ್ರಕಟಿಸಿದ ನಂತರ ಮಂಡಳಿಯ ಜಾಲತಾಣದಲ್ಲಿ ಪರಿಷ್ಕೃತ ಫಲಿತಾಂಶವನ್ನು ಪರಿಶೀಲಿಸಿಕೊಳ್ಳಬಹುದು.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ/ ಮರುಎಣಿಕೆ/ ಮರುಮೌಲ್ಯಮಾಪನಕ್ಕಾಗಿ ನಿಗದಿತ ಶುಲ್ಕವನ್ನು ಆನ್‌ಲೈನ್ ಮೂಲಕ ಮಾತ್ರ ಪಾವತಿಸಲು ಅವಕಾಶ ಕಲ್ಪಿಸಲಾಗಿದ್ದು, ನಿಗದಿತ ಶುಲ್ಕವನ್ನು **DEBIT CARD/CREDIT CARD/NET BANKING** ಮೂಲಕ ಪಾವತಿಸಬಹುದಾಗಿದೆ.

ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಸಲ್ಲಿಸಲಾಗುವ ಆನ್‌ಲೈನ್ ಅರ್ಜಿಗಳನ್ನು Download ಮಾಡಿಕೊಳ್ಳುವ ವಿಧಾನದ ಫ್ಲೋಚಾರ್ಟ್ ಅನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯಗೊಳಿಸಲಾಗಿದೆ.

**ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನದ ಆನ್‌ಲೈನ್ ಅರ್ಜಿ ಶುಲ್ಕದ ವಿವರ,**

(ಸರ್ಕಾರದ ಆದೇಶ ಸಂಖ್ಯೆ : ಇಡಿ 236 ಎಸ್‌ಎಲ್‌ಬಿ 2018, ಬೆಂಗಳೂರು, ದಿನಾಂಕ : 10-07-2020 ರನ್ವಯ)

| | | |
|---|---|---|
| **01** | ಉತ್ತರ ಪತ್ರಿಕೆಯ ಸ್ಕ್ಯಾನ್ ಪ್ರತಿ ಪಡೆಯಲು (ಒಂದು ವಿಷಯದ ಒಂದು ಪತ್ರಿಕೆಗೆ) ಶುಲ್ಕ | **ರೂ.500/- (ಐದು ನೂರು ರೂಪಾಯಿಗಳು)** |
| **02** | ಮರುಮೌಲ್ಯಮಾಪನ(ಒಂದು ವಿಷಯದ ಒಂದು ಪತ್ರಿಕೆಗೆ) ಶುಲ್ಕ | **ರೂ.800/- (ಎಂಟು ನೂರು ರೂಪಾಯಿಗಳು)** |
| **03** | ಮರುಎಣಿಕೆ (ಒಂದು ವಿಷಯದ ಒಂದು ಪತ್ರಿಕೆಗೆ) ಶುಲ್ಕ | **ರೂ.150/- (ನೂರ ಐವತ್ತು ರೂಪಾಯಿಗಳು)** |

**ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು**

**ಡಿಸೆಂಬರ್ 2022 ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪರೀಕ್ಷಾ ಕೇಂದ್ರದ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಕೆಳಕಂಡ ಅಂಶಗಳನ್ನು ಆಧಾರವಾಗಿರಿಸಿಕೊಂಡು ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಪರಿಶೀಲಿಸಿಕೊಳ್ಳಲು ತಿಳಿಸಿದೆ, ಯಾವುದೇ ಕಾರಣಕ್ಕೂ ಮಂಡಳಿಯಿಂದ ಫಲಿತಾಂಶ ಪಟ್ಟಿಯನ್ನು ಭೌತಿಕವಾಗಿ ಸಂಸ್ಥೆಗಳಿಗೆ ಕಳುಹಿಸಲಾಗುವುದಿಲ್ಲ**

1 ಡಿಸೆಂಬರ್ 2022 ರಲ್ಲಿ ಪರೀಕ್ಷೆ ತೆಗೆದುಕೊಂಡಿರುವ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು.

2 ಒಂದು ವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರದಿದ್ದಲ್ಲಿ/ ಫಲಿತಾಂಶ ತಡೆಹಿಡಿದಿರುವುದು ಕಂಡುಬಂದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸೂಕ್ತ ದಾಖಲೆಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.

3 ಪರೀಕ್ಷಾ ಮಂಡಳಿಯೊಂದಿಗೆ ಪತ್ರ ವ್ಯವಹರಿಸುವ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳು ಮುಖ ಪುಟದಲ್ಲಿ ವಿಳಾಸ, ತಮ್ಮ ಸಂಸ್ಥೆಗೆ ನೀಡಿರುವ ಪರೀಕ್ಷಾ ಕೇಂದ್ರ ಸಂಖ್ಯೆ, ದೂರವಾಣಿ ಸಂಖ್ಯೆ ಮತ್ತು E-Mail ವಿಳಾಸವನ್ನು ತಪ್ಪದೇ ನಮೂದಿಸುವುದು

4 ಅಭ್ಯರ್ಥಿಯ ಹೆಸರು, ತಂದೆ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ತಿದ್ದುಪಡಿಗಳಿದ್ದಲ್ಲಿ ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಶಾಲಾ ದಾಖಲಾತಿಯ ಉದ್ಧೃತ ಭಾಗ(Admission Extract)/ ವರ್ಗಾವಣೆ ಪತ್ರ(TC)ದ ದೃಢೀಕೃತ ಛಾಯಾಪ್ರತಿ/ ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ದೃಢೀಕೃತ ಛಾಯಾಪ್ರತಿ) ರೂ.200/- ಗಳ ದಂಡ ಶುಲ್ಕವನ್ನು ಮಂಡಳಿಗೆ ಪಾವತಿಸಲಾಗಿರುವ Neft Challan(ಇತರೆ ಪರೀಕ್ಷೆಗಳು) ಮೂಲಪ್ರತಿಯೊಂದಿಗೆ ತಿದ್ದುಪಡಿಯ ಮನವಿಯನ್ನು, ಫಲಿತಾಂಶ ಪ್ರಕಟಿಸಿದ 15 ದಿನಗಳ ಒಳಗಾಗಿ ಸಲ್ಲಿಸಿದಲ್ಲಿ, ನಿಯಮಾನುಸಾರ ಕ್ರಮ ವಹಿಸಲಾಗುವುದು.

5 ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಈ ಸುತ್ತೋಲೆಯ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಂದ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

15/3/2021

[ಗೋಪಾಲಕೃಷ್ಣ ಹೆಚ್.ಎನ್]
ನಿರ್ದೇಶಕರು (ಪರೀಕ್ಷೆಗಳು)

<u>ಇವರಿಗೆ:</u>

1. ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರುಗಳಿಗೆ ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಸಂಗೀತ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸುವುದು.
3. ಶಾಖಾಧಿಕಾರಿಗಳು ಗಣಕಶಾಖೆ ರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

**KARNATAKA SCHOOL EXAMINATION AND ASSESSMENT BOARD**
**6th Cross, Malleshwaram, Bengaluru – 560 003**

---

**FLOW CHART FOR ONLINE APPLICATION OF PHOTOVOPY , RETOTALLING AND REVALUATION OF ANSWER SCRIPTS**

**https://kseab.karnataka.gov.in/**

↓

Click ONLINE SERVICES

↓

Click Other exams

↓

Select Student

↓

Click Photocopy, Retotalling, Revaluation

↓

Click Online Application for particular Exam

↓

Click Application form for Scanned Copy

↓

Enter Exam Registration Number

**View**

↓

Select Subjects for Scanned copy

↓

Enter Mobile Number

↓

Enter e-mail ID

↓

Enter Student Postal Address

↓

**SUBMIT**

↓

Challan Number will be displayed
(Note down Challan Number for future reference)

↓

Click Make Payment

↓

Select Online payment
(Credit Card, Debit Card, Net Banking.....)

↓

SUBMIT

↓

Pay Fee through Online

↓

**Print Acknowledgement**

**NOTE: 1**

1. Candidate can know the status of Photocopy Application by clicking on '**Click here to know status for scanned copy'** .
2. Candidate can change their registered Mobile number by using ' **Change Mobile Number'** option.

**NOTE 2. (RE TOTALING OF MARKS)**

1. Candidate can apply for **Retotalling of marks,** after getting Photocopy of Answer script by clicking **' Application for Retotalling'** in the Home page.
2. Candidate can know the status of Retotalling of marks of answer scripts by clicking on '**Click here to know status of Retotalling of marks of answer scripts.**

**NOTE 3. (Re Valuation of Answer scripts)**

1. Candidate can apply for Revaluation after getting Photocopy of Answer script by clicking 'Application **for Revaluation of answer scripts '** in the Home page.

Candidate can know the status of Revaluation of answer scripts by clicking on '**Click here to know status of Revaluation of answer scripts.**